# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 457(579) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಆಯುಷ್ಯ ಇಲಾಖೆಯಲ್ಲಿ ರಾಜ್ಯ ಸರ್ಕಾರದ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ತಜ್ಞ ವೈದ್ಯರುಗಳೆಷ್ಟು; ಅವರುಗಳು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳಗಳ ಸಂಪೂರ್ಣ ಮಾಹಿತಿ ನೀಡುವುದು; | ಆಯುಷ್ ಇಲಾಖೆಯ ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆಯಡಿಯಲ್ಲಿ 131 ತಜ್ಞ ವೈದ್ಯರುಗಳು ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಅವರುಗಳು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳಗಳ ಸಂಪೂರ್ಣ ಮಾಹಿತಿಯನ್ನು **ಅನುಬಂಧದಲ್ಲಿ** ನೀಡಲಾಗಿದೆ. |
| ಆ) | ಕಳೆದ 20 ವರ್ಷಗಳಿಂದ ಹೊಸದಾಗಿ ರಾಜ್ಯ ಸರ್ಕಾರದಿಂದ ಸೃಜನೆಗೊಂಡಿರದ ಒಟ್ಟು ತಜ್ಞ ವೈದ್ಯರ ಸಂಖ್ಯೆ ಎಷ್ಟು; | ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ ಒಟ್ಟು 160 ತಜ್ಞ ವೈದ್ಯರ ಸೇವೆಯನ್ನು ಗುತ್ತಿಗೆ ಆಧಾರದ ಮೇಲೆ ಪಡೆಯಲು ಭಾರತ ಸರ್ಕಾರದಿಂದ ಅನುಮೋದನೆಯಾಗಿರುತ್ತದೆ. |
| ಇ) | ಖಾಯಂ ತಜ್ಞ ವೈದ್ಯರ ಹುದ್ದೆಗಳಿಲ್ಲದೆ ಗುತ್ತಿಗೆಯಲ್ಲಿ ತಜ್ಞ ವೈದ್ಯರನ್ನು ನೇಮಕ ಮಾಡಬಹುದೇ; ಮಾಡಿದ್ದಲ್ಲಿ, ಇವರ ಮೇಲುಸ್ತುವಾರಿ ನೋಡಿಕೊಳ್ಳುವವರು ಯಾರು; (ಜವಾಬ್ದಾರಿಗಳ ಬಗ್ಗೆ ಮಾಹಿತಿ ನೀಡುವುದು) | ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ ಸುತ್ತೋಲೆ ಸಂಖ್ಯೆ: ಆಯುಷ್/07/ಐಇಸಿ (3) 2015-16, ದಿನಾಂಕ: 21.08.2019 ರಲ್ಲಿನ ಮಾರ್ಗಸೂಚಿಗಳನ್ವಯ, ಜಿಲ್ಲಾ ಆಯುಷ್ ಅಧಿಕಾರಿಗಳ ಕೋರಿಕೆ ಮೇರೆಗೆ ಜಿಲ್ಲಾ/ಉಪ ಜಿಲ್ಲಾಮಟ್ಟದ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಿ, ಸದರಿ ಆಸ್ಪತ್ರೆಗಳಿಗೆ ಗುತ್ತಿಗೆ ಆಧಾರದ ಮೇಲೆ ತಜ್ಞ ವೈದ್ಯರನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ಇದರ ಮೇಲುಸ್ತುವಾರಿಯನ್ನು ಜಿಲ್ಲಾ ಆಯುಷ್ ಅಧಿಕಾರಿಗಳು ನೋಡಿಕೊಳ್ಳುವರು. |

| | | |
|---|---|---|
| | | **ಜವಾಬ್ದಾರಿಗಳು:**<br><br>• ಆಸ್ಪತ್ರೆ/ಚಿಕಿತ್ಸಾಲಯಗಳಿಗೆ ಬರುವ ಒಳ ಹಾಗೂ ಹೊರ ರೋಗಿಗಳಿಗೆ ಸೂಕ್ತ ಚಿಕಿತ್ಸೆ ಒದಗಿಸುವುದು ಹಾಗೂ ಉಚಿತ ಔಷಧಿ ವಿತರಣೆ.<br>• ಮೇಲಾಧಿಕಾರಿಗಳಿಂದ ಸೂಚಿಸಲ್ಪಡುವ ಇತರೆ ಕರ್ತವ್ಯಗಳನ್ನು ನಿರ್ವಹಿಸುವುದು. |
| ಈ) | ಖಾಯಂ ತಜ್ಞ ವೈದ್ಯರುಗಳಿಲ್ಲದೆ ಗುತ್ತಿಗೆಯಲ್ಲಿ ನೇಮಕ ಮಾಡಿಕೊಂಡು ಆರೋಗ್ಯ ಸೇವೆ ನೀಡುವಾಗ ಸಾರ್ವಜನಿಕರಿಗೆ ತೊಂದರೆ ಆದಲ್ಲಿ, ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು; ಖಾಯಂ ಹುದ್ದೆಗಳ ಸೃಜನೆ ಬಗ್ಗೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ? | ಗುತ್ತಿಗೆ ತಜ್ಞ ವೈದ್ಯರುಗಳಿಂದ ಆರೋಗ್ಯ ಸೇವೆಯಲ್ಲಿ ಸಾರ್ವಜನಿಕರಿಗೆ ತೊಂದರೆ ಉಂಟಾದಲ್ಲಿ ಸಂಬಂಧಿಸಿದ ತಜ್ಞ ವೈದ್ಯರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.<br><br>ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆಯು ತಾತ್ಕಾಲಿಕ ಯೋಜನೆಯಾಗಿದ್ದು, ಖಾಯಂ ಹುದ್ದೆಗಳ ಸೃಜನೆಗೆ ಅವಕಾಶವಿರುವುದಿಲ್ಲ. |

**ಸಂಖ್ಯೆ: ಆಕುಕ 33 ಪಿಟಿಡಿ 2023**

(**ಡಾ|| ಕೆ.ಸುಧಾಕರ್**)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು